# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 696 (765) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶರವಣ ಟಿ ಎ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅಭಿವೃದ್ಧಿಪಡಿಸಿದ ಪ್ರದೇಶಗಳಲ್ಲಿ ತೆರಿಗೆ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಲಾಗಿರುವ ಕೈಗಾರಿಕಾ ಪ್ರದೇಶಗಳ ಪೈಕಿ ವಿಶೇಷ ಹೂಡಿಕೆ ಪ್ರದೇಶಗಳೆಂದು ಘೋಷಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ The Karnataka Special Investment Region (SIR) Act 2022 ರ ಅಡಿಯಲ್ಲಿ ತೆರಿಗೆ ಹಣವನ್ನು ವಸೂಲಿ ಮಾಡಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಯಾವ ವರ್ಷದಿಂದ ಜಾರಿಗೆ ಮಾಡಲಾಗಿದೆ ಎಷ್ಟು ಕೈಗಾರಿಕಾ ಪ್ರದೇಶಗಳಲ್ಲಿ ವಸೂಲಿ ಮಾಡಲಾಗುತ್ತಿದೆ; ಪ್ರಾರಂಭದಿಂದ ಇಲ್ಲಿಯವರಿಗೆ ಎಷ್ಟು ತೆರಿಗೆ ವಸೂಲಿ ಮಾಡಲಾಗಿದೆ; ಯಾವ ಉದ್ದೇಶಗಳಿಗೆ ಬಳಸಲಾಗಿದೆ; | ಮಂಡಳಿ ವತಿಯಿಂದ 2025-26ನೇ ಸಾಲಿನಿಂದ ತೆರಿಗೆಯನ್ನು ಸಂಗ್ರಹಿಸಲಾಗುತ್ತಿದೆ. ಇದರಲ್ಲಿ ಒಟ್ಟು 22 ವಿಶೇಷ ಹೂಡಿಕೆ ಪ್ರದೇಶಗಳೆಂದು ಘೋಷಿಸಿರುವ ಕೈಗಾರಿಕಾ ಪ್ರದೇಶಗಳಿಂದ ತೆರಿಗೆಯನ್ನು ಸಂಗ್ರಹಿಸಲಾಗುತ್ತಿದ್ದು, 2025-26ನೇ ಸಾಲಿನಲ್ಲಿ ರೂ.70,55,09,739/- ಗಳನ್ನು ಹಾಗೂ 2026-27ನೇ ಸಾಲಿನಲ್ಲಿ ರೂ.73,39,27,372/- ಗಳು ಸೇರಿದಂತೆ ಒಟ್ಟು 143,94,37,111/- ಗಳನ್ನು ತೆರಿಗೆ ಮೂಲಕ ಸಂಗ್ರಹಿಸಲಾಗಿರುತ್ತದೆ.<br><br>ಸಂಗ್ರಹಿಸಲಾದ ತೆರಿಗೆ ಮೊತ್ತದಲ್ಲಿ ಶೇಕಡ 30 ರಷ್ಟು ಹಣವನ್ನು ಸ್ಥಳೀಯ ಸಂಸ್ಥೆಗಳಾದ ಗ್ರಾಮಪಂಚಾಯಿತಿ/ಪಟ್ಟಣ ಪಂಚಾಯಿತಿ/ ಪುರಸಭೆ/ ನಗರಸಭೆ ಹಾಗೂ ಇತರೆ ಸ್ಥಳೀಯ ಸಂಸ್ಥೆಗಳಿಗೆ ನೀಡಬೇಕಾಗಿರುತ್ತದೆ ಮತ್ತು ಉಳಿದ ಶೇಕಡ 70 ರಷ್ಟು ಹಣದಲ್ಲಿ ಸಂಬಂಧಿಸಿದ ಕೈಗಾರಿಕಾ ಪ್ರದೇಶಗಳ ನಿರ್ವಹಣೆಗಾಗಿ ಬಳಸಿಕೊಳ್ಳಲು ಉದ್ದೇಶಿಸಲಾಗಿದೆ. |

| | | |
|---|---|---|
| ಇ) | ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿಗಳು ಮತ್ತು ಕೆಐಎಡಿಬಿ ಎರಡು ತೆರಿಗೆ ನೀಡುವಂತೆ ಕೈಗಾರಿಕೆಗಳಿಗೆ ನೋಟೀಸ್ ಜಾರಿಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗಾರಿಕೆಗಳ ಮಾಲೀಕರು ಯಾರಿಗೆ ತೆರಿಗೆ ನೀಡಬೇಕು ಈ ಕುರಿತು ಸೂಕ್ತ ಸುತ್ತೋಲೆ ಆದೇಶಗಳನ್ನು ಹೊರಡಿಸಲಾಗುವುದೇ? (ಮಾಹಿತಿ ನೀಡುವುದು) | ಕರ್ನಾಟಕ ವಿಶೇಷ ಹೂಡಿಕೆ ಪ್ರದೇಶ **(Special Investment Region)** ಅಧಿನಿಯಮ 2022 ರನ್ವಯ ವಿಶೇಷ ಹೂಡಿಕೆ ಪ್ರದೇಶಗಳಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯನ್ನು ಪ್ರಾದೇಶಿಕ ಅಭಿವೃದ್ಧಿ ಪ್ರಾಧಿಕಾರ **(Regional Development Authority)** ಎಂದು ಆದೇಶಿಸಿರುವ ಹಿನ್ನೆಲೆಯಲ್ಲಿ ಮಂಡಳಿಯ ವ್ಯಾಪ್ತಿಯಲ್ಲಿ ಕರ್ನಾಟಕದಾದ್ಯಂತ ಒಟ್ಟು 22 ಕೈಗಾರಿಕಾ ಪ್ರದೇಶಗಳನ್ನು ವಿಶೇಷ ಹೂಡಿಕೆ ಪ್ರದೇಶವೆಂದು ಘೋಷಿಸಿದೆ. ಸದರಿ ಕೈಗಾರಿಕಾ ಪ್ರದೇಶಗಳ ವ್ಯಾಪ್ತಿಯಲ್ಲಿ ಬರುವ ಕೈಗಾರಿಕೆಯ ಮಾಲೀಕರಿಂದ 2025-26 ನೇ ಸಾಲಿನಿಂದ ಮಂಡಳಿ ವತಿಯಿಂದ ತೆರಿಗೆಯನ್ನು ಸಂಗ್ರಹಿಸಲಾಗುತ್ತಿದೆ. |

**ಸಂಖ್ಯೆ: ಸಿಐ 448 ಐಎಪಿ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು